## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯದ ಬರಪೀಡಿತ ಗ್ರಾಮೀಣ ಪ್ರದೇಶಗಳಲ್ಲಿ ತುರ್ತು ಕುಡಿಯುವ ನೀರಿನ ಕಾಮಗಾರಿಗಳ ಅನುಷ್ಠಾನಕ್ಕಾಗಿ ಹೆಚ್ಚುವರಿ / ವಿಶೇಷ ಅನುದಾನ ಬಿಡುಗಡೆ ಕುರಿತು.

**ಓದಲಾಗಿದೆ:**

1. ಜನಪ್ರತಿನಿಧಿಗಳು / ಜಿಲ್ಲಾ ಪಂಚಾಯತಿಗಳಿಂದ ಸ್ವೀಕೃತಿಯಾಗಿರುವ ಹೆಚ್ಚುವರಿ ಅನುದಾನ ಬೇಡಿಕೆಯ ಪ್ರಸ್ತಾವನೆಗಳು.
2. ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 260 ವೆಚ್ಚ ಅ/ 2015, ದಿನಾಂಕ:04.08.2015.
3. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/133/ಗ್ರಾನೀಸ(4)/2015, ದಿನಾಂಕ: 14.08.2015.
4. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/133/ಗ್ರಾನೀಸ(4)/2015, ದಿನಾಂಕ: 21.08.2015.
5. ಸರ್ಕಾರದ ಆದೇಶ ಸಂಖ್ಯೆ:ಕಂಇ/273/ಟಿಎನ್ಆರ್/2015, ದಿನಾಂಕ:31.08.2015.

**ಪೀಠಿಕೆ:**

ಪ್ರಸ್ತುತ, ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸಿರುವಂತಹ ಸಮಸ್ಯಾತ್ಮಕ ಗ್ರಾಮಗಳಲ್ಲಿ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸುವ ಸಲುವಾಗಿ ಹೆಚ್ಚುವರಿ / ವಿಶೇಷ ಅನುದಾನ ಬಿಡುಗಡೆ ಮಾಡಲು ಸರ್ಕಾರಕ್ಕೆ ಬೇಡಿಕೆಯ ಪ್ರಸ್ತಾವನೆಗಳು ಸಲ್ಲಿಕೆಯಾಗಿದ್ದು, ಈ ಸಂಬಂಧ ಹೆಚ್ಚುವರಿ ಬೇಡಿಕೆ ಪ್ರಸ್ತಾಪದಂತೆ ತುರ್ತು ಕುಡಿಯುವ ನೀರಿನ ಕಾಮಗಾರಿಗಳನ್ನು ಆದ್ಯತೆ ಮೇಲೆ ಸಾರ್ವಜನಿಕ ಹಿತದೃಷ್ಠಿಯಿಂದ ಅನುಷ್ಠಾನಗೊಳಿಸಲು ಮೇಲೆ ಓದಲಾದ (2)ರ ಆರ್ಥಿಕ ಇಲಾಖೆಯ ಟಿಪ್ಪಣಿಯಲ್ಲಿ **2015-16ನೇ** ಸಾಲಿನ ಆಯವ್ಯಯದಲ್ಲಿ ಲೆಕ್ಕ ಶೀರ್ಷಿಕೆ:**2215-01-102-9-08-132**ರ ಬಂಡವಾಳ ವೆಚ್ಚಗಳಡಿ ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿನ ಸಮಸ್ಯಾತ್ಮಕ ಗ್ರಾಮಗಳಲ್ಲಿ ಕುಡಿಯುವ ನೀರಿಗಾಗಿ ಹೊಸದಾಗಿ ಕೊರೆದಿರುವ ಕೊಳವೆಬಾವಿಗಳ ಬಿಲ್‌ಗಳನ್ನು ಪಾವತಿಸಲು **ರೂ.75.00ಕೋಟಿ** ಅನುದಾನ ಬಿಡುಗಡೆ ಮಾಡಲು ಆರ್ಥಿಕ ಇಲಾಖೆಯಿಂದ ಸಹಮತಿ ದೊರೆತಿದ್ದು, ಅದರಂತೆ ಉಲ್ಲೇಖ (3) ಮತ್ತು (4)ರ ಸರ್ಕಾರದ ಆದೇಶಗಳಲ್ಲಿ **2015-16**ರ ಸಾಲಿನಲ್ಲಿ **NRDWP** ಯೋಜನೆಯ ರಾಜ್ಯ ವಲಯದಡಿ ಹೆಚ್ಚುವರಿಯಾಗಿ **ರೂ.63.00ಕೋಟಿ** ಅನುದಾನವನ್ನು **126** ಬರಪೀಡಿತ ತಾಲ್ಲೂಕುಗಳಲ್ಲಿನ ಸಮಸ್ಯಾತ್ಮಕ ಗ್ರಾಮಗಳಲ್ಲಿ ತುರ್ತಾಗಿ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಲು ಅಗತ್ಯವಿರುವ ತುರ್ತು ಕುಡಿಯುವ ನೀರಿನ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಹೆಚ್ಚುವರಿ / ವಿಶೇಷ ಅನುದಾನ ಬಿಡುಗಡೆ ಮಾಡಲಾಗಿದೆ. ಪುನಃ ಉಲ್ಲೇಖ (5)ರ ಸರ್ಕಾರದ ಆದೇಶದಲ್ಲಿ ರಾಜ್ಯದ 7 ಜಿಲ್ಲೆಗಳಲ್ಲಿನ **9** ತಾಲ್ಲೂಕುಗಳನ್ನು ಬರಪೀಡಿತವೆಂದು ಘೋಷಿಸಿದ್ದು, ಸದರಿ ಬರಪೀಡಿತ ತಾಲ್ಲೂಕುಗಳಲ್ಲಿನ ಸಮಸ್ಯಾತ್ಮಕ ಗ್ರಾಮಗಳಲ್ಲಿ ತುರ್ತಾಗಿ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಲು ಅಗತ್ಯವಿರುವ ತುರ್ತು ಕುಡಿಯುವ ನೀರಿನ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಹೆಚ್ಚುವರಿ / ವಿಶೇಷ ಅನುದಾನ ಬಿಡುಗಡೆ ಮಾಡಬೇಕಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/133/ಗ್ರಾನೀಸ(4)/2015 ಬೆಂಗಳೂರು, ದಿನಾಂಕ: 31.08.2015**

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ **NRDWP** ಮಾರ್ಗಸೂಚಿಗಳನ್ವಯ ರಾಜ್ಯ ವಲಯದ **MNP (C&Q)** ಘಟಕದಡಿ **ರೂ.450.00ಲಕ್ಷ (ನಾಲ್ಕು ನೂರು ಐವತ್ತು ಲಕ್ಷ ರೂಪಾಯಿಗಳು ಮಾತ್ರ)** ಅನುದಾನವನ್ನು ಈ ಆದೇಶದೊಂದಿಗೆ ಲಗತ್ತಿಸಿರುವ **ಅನುಬಂಧ-1**ರಲ್ಲಿರುವಂತೆ ರಾಜ್ಯದ 7 ಜಿಲ್ಲಾ ಪಂಚಾಯತಿ ವ್ಯಾಪ್ತಿಯಲ್ಲಿನ 9 ಬರಪೀಡಿತ ತಾಲ್ಲೂಕುಗಳಿಗೆ ತುರ್ತು ಕುಡಿಯುವ ನೀರಿನ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

2. ಈ ಆದೇಶದಲ್ಲಿ ಬಿಡುಗಡೆಯಾದ ಅನುದಾನವು ಕೆಳಕಂಡ ನಿಬಂಧನೆಗೊಳಪಟ್ಟಿರುತ್ತದೆ:

I. ತೀವ್ರ ಅನಿವಾರ್ಯವಿದ್ದಲ್ಲಿ ಮಾತ್ರ ಭೂ ವಿಜ್ಞಾನಿಗಳ ಸಲಹೆ ಮೇರಗೆ **ಹೊಸ ಬೋರ್‌ವೆಲ್**ಗಳನ್ನು ಕೊರೆಸಿ, ಸದರಿ **ಬೋರ್‌ವೆಲ್**ಗಳು ಸಾರ್ವಜನಿಕ ಉಪಯೋಗಕ್ಕೆ ಲಭ್ಯವಾಗುವಂತೆ ನೋಡಿಕೊಳ್ಳತಕ್ಕದ್ದು.

II. ಎಲ್ಲಿ ನೈಜವಾಗಿ ಕುಡಿಯುವ ನೀರಿನ ಸಮಸ್ಯೆಯಿದೆಯೋ ಅಂತಹ ಕಡೆಗಳಲ್ಲಿ ಮಾತ್ರ ಅಗತ್ಯ ಪುನಃಶ್ಚೇತನ (ಅಂದರೆ – ಕೊಳವೆ ಬಾವಿಗಳನ್ನು ಕೊರೆಯಿಸುವುದು, ಸ್ವಚ್ಚಗೊಳಿಸುವುದು, ಹೈಡ್ರೋಫ್ರಾಕ್ಚರಿಂಗ್‌ಗೊಳಿಸುವುದು, ಪಂಪ್ ಮೋಟಾರ್ ಅಳವಡಿಸುವುದು, ಪೈಪ್‌ಲೈನ್ ವಿಸ್ತರಣೆ)ದಂತಹ ಸಣ್ಣ ಪ್ರಮಾಣದ ಕಾಮಗಾರಿಗಳನ್ನು ಮಾತ್ರ ಅನುಷ್ಠಾನಗೊಳಿಸತಕ್ಕದ್ದು.

III. ಹೊಸ ಕೊಳವೆ ಬಾವಿಗಳನ್ನು ಕೊರೆಯುವ ಮುನ್ನ ಅದರ ಸ್ಥಳ ಮತ್ತು ಗುರುತಿಗಾಗಿ **GPS System** ಮುಖೇನ ಅಧಿಕೃತ ದಾಖಲೆ ಮಾಡುವುದರ ಜೊತೆಗೆ, ಅದರ ಛಾಯಾ ಚಿತ್ರವನ್ನು ಕಾಮಗಾರಿಗೆ ಮುನ್ನ ಹಾಗೂ ನಂತರ ತೆಗೆದು ಗಾಂಧಿ ಸಾಕ್ಷಿಕಾಯಕದಲ್ಲಿ ದಾಖಲಿಸತಕ್ಕದ್ದು. ಸಂಬಂಧಪಟ್ಟ ಸ್ಥಳೀಯ ಹಿರಿಯ ಅಧಿಕಾರಿ ಈ ಪ್ರಕ್ರಿಯೆಯನ್ನು ಧೃಡೀಕರಿಸತಕ್ಕದ್ದು.

IV. ~~ಕ್ರಿಯಾ ಯೋಜನೆಯನ್ನು~~ ಆಯಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಅನುಮೋದಿಸತಕ್ಕದ್ದು. ಈಗ ಒದಗಿಸಿರುವ ಅನುದಾನದ ಮಿತಿಯೊಳಗೆ ತುರ್ತು ಕಾಮಗಾರಿಗಳನ್ನು ಸ್ಥಳೀಯ ಅಗತ್ಯತೆ ಆಧರಿಸಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ (RDWSD) ಮುಖೇನ ಅನುಷ್ಠಾನಗೊಳಿಸಬೇಕು.

3. ಅನುಷ್ಠಾನಗೊಳಿಸಿರುವ ಕಾಮಗಾರಿಗಳ ವಿವರಗಳನ್ನು ಸಂಬಂಧಪಟ್ಟ ಗ್ರಾಮ ಪಂಚಾಯತಿಗಳ ಮಾಹಿತಿಗಾಗಿ ಕಳುಹಿಸುವುದು. **ಜಿಲ್ಲಾ ಪಂಚಾಯತ್ ಯಾವುದೇ ಕಾರಣಕ್ಕೂ ಈ ಆದೇಶದಲ್ಲಿ ಹೇಳಲಾದ ಕಾಮಗಾರಿಗಳು ಇತರೆ ಯಾವುದೇ ಗ್ರಾಮೀಣ ನೀರು ಸರಬರಾಜು ಯೋಜನೆಗಳಡಿ ಪುನರಾವರ್ತನೆಯಾಗದಂತೆ ನೋಡಿಕೊಳ್ಳತಕ್ಕದ್ದು.** ಕಾಮಗಾರಿಗಳ ಅನುಷ್ಠಾನಕ್ಕೆ ಮುನ್ನ ಸಕ್ಷಮ ಪ್ರಾಧಿಕಾರದಿಂದ ತಾಂತ್ರಿಕ ಅನುಮೋದನೆ ಪಡೆದುಕೊಳ್ಳತಕ್ಕದ್ದು.

4. ಈ ಆದೇಶದಲ್ಲಿ ಬಿಡುಗಡೆಯಾದ ಅನುದಾನವನ್ನು ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ **(RDWSD)**ರವರ ಮೇಲು ರುಜುವಿನೊಂದಿಗೆ ರಾಜ್ಯ ಹುಜೂರು ಖಜಾನೆಯಿಂದ ಡ್ರಾ ಮಾಡಿ ಕೇಂದ್ರ ಸರ್ಕಾರಕ್ಕೆ ಘೋಷಿಸಿರುವ ಸಿಂಡಿಕೇಟ್ ಬ್ಯಾಂಕ್‌ನ **SB** ಖಾತೆ ಸಂಖ್ಯೆ: **04462010091577**ಗೆ ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರಿನ ಯೋಜನೆ **(NRDWP)**ಯಡಿ ರಾಜ್ಯದ ಪಾಲಾಗಿ ಜಮೆ ಮಾಡಬೇಕು.

5. ಈ ಆದೇಶದಲ್ಲಿ ಬಿಡುಗಡೆಯಾದ ರಾಜ್ಯವಲಯದ ಅನುದಾನವನ್ನು ಲೆಕ್ಕಶೀರ್ಷಿಕೆ:**2215-01-102-9-08-132**ರಡಿ ಗಣನೆಗೆ ತೆಗೆದುಕೊಂಡು, **RTGS** ಮುಖೇನ ರಾಜ್ಯ ನೀರು ಮತ್ತು ನೈರ್ಮಲ್ಯ ಮಿಷನ್ **(SWSM)** ಬ್ಯಾಂಕ್ ಖಾತೆ ಮುಖೇನ ವಿನಿಯೋಗಿಸತಕ್ಕದ್ದು. **ಸಿಂಡಿಕೇಟ್ ಬ್ಯಾಂಕ್ ಮೂಲ ಖಾತೆ ಸಂಖ್ಯೆ: 04462010091577** ಮುಖೇನ ಸಂಬಂಧಪಟ್ಟ **(ಅನುಬಂಧ-1ರಲ್ಲಿನಂತೆ)** ಜಿಲ್ಲಾ ಪಂಚಾಯತ್‌ಗಳು ಕಳುಹಿಸುವ ಬಿಲ್‌ಗಳನ್ನು ಮಾನ್ಯ ಮಾಡತಕ್ಕದ್ದು. ಸದರಿ **ರೂ.450.00**ಲಕ್ಷಗಳ ಅನುದಾನ ವಿನಿಯೋಗದ ಆರ್ಥಿಕ ಮತ್ತು ಭೌತಿಕ ಪ್ರಗತಿಗಳನ್ನು ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ **(CE/RDWSD)** ಹಾಗೂ ಸಂಬಂಧಪಟ್ಟ ಜಿಲ್ಲಾ ಪಂಚಾಯತ್‌ಗಳು **IMIS**ನಡಿ ಹಾಗೂ ಗಾಂಧಿ ಸಾಕ್ಷಿ ಕಾಯಕದಲ್ಲಿ ದಾಖಲಿಸತಕ್ಕದ್ದು.

6. ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ 117 ಗ್ರಾನೀಸ(4) 2011 ದಿ:15.10.2011ರನ್ವಯ ಅಧೀಕ್ಷಕ ಅಭಿಯಂತರರು, **ಗ್ರಾಮೀಣ ಕುಡಿಯುವ** ನೀರು ಮತ್ತು ನೈರ್ಮಲ್ಯ ಇಲಾಖೆ (RDWSD) ವೃತ್ತ ಕಛೇರಿ ಇವರುಗಳು ಈ ಆದೇಶದಡಿ ಅನುಷ್ಠಾನಗೊಳಿಸುವ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಪರಿವೀಕ್ಷಣೆ ಮಾಡಿ, ಸರ್ಕಾರಕ್ಕೆ ವಾಸ್ತವಿಕ ಚಿತ್ರಣ ನೀಡತಕ್ಕದ್ದು.

7. ಈ ಆದೇಶವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರು ಯೋಜನೆಗಳ ಮುಂದುವರಿಕೆಗೆ ಹೊರಡಿಸಿರುವ ಆದೇಶ ಸಂಖ್ಯೆ: **ಗ್ರಾಅಪ/253/ಎಐಎಫ್ಎನ್/2015, ದಿನಾಂಕ:01.04.2015**ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ. ಕೃಷ್ಣಪ್ಪ)
ಸರ್ಕಾರದ ಉಪ ಕಾರ್ಯದರ್ಶಿ (ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು–1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು–2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು (ಎಯು–1) ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ,ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ / ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನಸೌಧ / ವಿಕಾಸಸೌಧ ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಯೋಜನಾ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು,
9. ಬೆಂಗಳೂರು. ವಿಶೇಷಾಧಿಕಾರಿ (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಬೆಂಗಳೂರು–09
10. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
11. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 2ನೇ ಮಹಡಿ, ಕಾವೇರಿಭವನ, ಬೆಂಗಳೂರು–09.
12. ತುಮಕೂರು, ದಾವಣಗೆರೆ, ಮೈಸೂರು, ಹಾಸನ, ಚಿಕ್ಕಮಗಳೂರು, ಹಾವೇರಿ ಮತ್ತು ಬೆಂಗಳೂರು (ಗ್ರಾ) ಜಿಲ್ಲಾ ಪಂಚಾಯತ್‌ಗಳ ಅಧ್ಯಕ್ಷರುಗಳು
13. ತುಮಕೂರು, ದಾವಣಗೆರೆ, ಮೈಸೂರು, ಹಾಸನ, ಚಿಕ್ಕಮಗಳೂರು, ಹಾವೇರಿ ಮತ್ತು ಬೆಂಗಳೂರು (ಗ್ರಾ) ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು / ಮುಖ್ಯ ಲೆಕ್ಕಾಧಿಕಾರಿಗಳು.
14. ರಾಜ್ಯದ ಎಲ್ಲಾ (4) ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತಗಳ ಸೂಪರಿಂಟೆಂಡಿಂಗ್ ಇಂಜಿನಿಯರ್‌ಗಳು.
15. ತುಮಕೂರು, ದಾವಣಗೆರೆ, ಮೈಸೂರು, ಹಾಸನ, ಚಿಕ್ಕಮಗಳೂರು, ಹಾವೇರಿ ಮತ್ತು ಬೆಂಗಳೂರು (ಗ್ರಾ) ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳ ಕಾರ್ಯಪಾಲಕ ಇಂಜಿನಿಯರ್‌ಗಳು.
16. ಸಂಬಂಧಪಟ್ಟ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
17. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿಗಳು.
18. ಆಯುಕ್ತರು, **RDWSD** ಮತ್ತು ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿ / ಆಂತರಿಕ ಆರ್ಥಿಕ ಸಲಹೆಗಾರರು / ಇವರುಗಳ ಆಪ್ತ ಸಹಾಯಕರು.
19. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್‌ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
20. ಉಪ ನಿರ್ದೇಶಕರು, Network Management Center (TNMC), ನಂ:49, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
21. ತುಮಕೂರು, ದಾವಣಗೆರೆ, ಮೈಸೂರು, ಹಾಸನ, ಚಿಕ್ಕಮಗಳೂರು, ಹಾವೇರಿ ಮತ್ತು ಬೆಂಗಳೂರು (ಗ್ರಾ) ಜಿಲ್ಲೆಗಳ ಜಿಲ್ಲಾ ಖಜಾನಾಧಿಕಾರಿಗಳು.
22. ಮ್ಯಾನೇಜರ್, ಸಿಂಡಿಕೇಟ್ ಬ್ಯಾಂಕ್, **BWSSB** ಬ್ರ್ಯಾಂಚ್, ರಾಜದೂತ್ ಕಾಂಪ್ಲೆಕ್ಸ್, ಅವೆನ್ಯೂ ರಸ್ತೆ, ಬೆಂಗಳೂರು.
23. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
24. ಸಂಬಂಧಪಟ್ಟ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾ.ಕು.ನೀ ಮತ್ತು ನೈರ್ಮಲ್ಯ ಉಪ ವಿಭಾಗಗಳು.
25. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
26. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
27. ಗ್ರಾಅಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು).

## ಅನುಬಂಧ – 1

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 133 ಗ್ರಾನೀಸ(4)2015, ಬೆಂಗಳೂರು, ದಿನಾಂಕ: 31.08.2015ರ ಲಗತ್ತು**

| ಕ್ರ ಸಂ. | ಜಿಲ್ಲೆ | ತಾಲ್ಲೂಕು | | ಬಿಡುಗಡೆ ಮಾಡಲಾದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|---|
| 1 | ತುಮಕೂರು | 1 | ತಿಪಟೂರು | 50.00 |
| | | | ಒಟ್ಟು | **50.00** |
| 2 | ದಾವಣಗೆರೆ | 2 | ಚನ್ನಗಿರಿ | 50.00 |
| | | | ಒಟ್ಟು | **50.00** |
| 3 | ಮೈಸೂರು | 3 | ಹುಣಸೂರು | 50.00 |
| | | 4 | ಪಿರಿಯಾಪಟ್ಟಣ | 50.00 |
| | | | ಒಟ್ಟು | **100.00** |
| 4 | ಹಾಸನ | 5 | ಅರಕಲಗೂಡು | 50.00 |
| | | | ಒಟ್ಟು | **50.00** |
| 5 | ಚಿಕ್ಕಮಗಳೂರು | 6 | ತರಿಕೆರೆ | 50.00 |
| | | | ಒಟ್ಟು | **50.00** |
| 6 | ಹಾವೇರಿ | 7 | ಹಿರೆಕೆರೂರು | 50.00 |
| | | | ಒಟ್ಟು | **50.00** |
| 7 | ಬೆಂಗಳೂರು (ಗ್ರಾ) | 8 | ದೊಡ್ಡಬಳ್ಳಾಪುರ | 50.00 |
| | | 9 | ಹೊಸಕೋಟೆ | 50.00 |
| | | | ಒಟ್ಟು | **100.00** |
| | | | ಒಟ್ಟು ಮೊತ್ತ | **450.00** |

ಸರ್ಕಾರದ ಉಪ ಕಾರ್ಯದರ್ಶಿ(ಗ್ರಾನೀಸ)

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ